Akashvani: Bangalore
National Bulletin In Kannada
10.07.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
10.07.2026: 13.10hrs
**********

ಮುಖ್ಯಾಂಶಗಳು :

1. ಪ್ರಧಾನಿ ನರೇಂದ್ರ ಮೋದಿ ಆಸ್ಟ್ರೇಲಿಯಾ ಪ್ರವಾಸ ಸಂಪನ್ನ; ನ್ಯೂಜಿಲೆಂಡ್‌ನ ಆಕ್ಲೆಂಡ್‌ಗೆ ಪ್ರಯಾಣ
2. ಇ-೮೫ ಇಂಧನ ಪರಿಚಯಿಸಲು ಕೇಂದ್ರ ಸರ್ಕಾರ ಯೋಜನೆ - ಕೇಂದ್ರ ಸಚಿವ ಹರ್ದೀಪ್ ಸಿಂಗ್ ಪುರಿ
3. ದೇಶದ ಒಟ್ಟು ವಿದ್ಯುತ್ ಪೂರೈಕೆಯಲ್ಲಿ ನವೀಕರಿಸಬಹುದಾದ ಇಂಧನ ಮೂಲಗಳಿಂದ ಶೇಕಡ ೫೦.೨ರಷ್ಟು ಕೊಡುಗೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
4. ಮಹಿಳಾ ಟೆಸ್ಟ್ ಕ್ರಿಕೆಟ್; ಭಾರತ-ಇಂಗ್ಲೆಂಡ್ ತಂಡಗಳ ನಡುವೆ ಸೆಣಸಾಟ
5. ಫಿಫಾ ವಿಶ್ವಕಪ್ ಪುಟ್ಬಾಲ್: ಎರಡನೇ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಸ್ಪೇನ್-ಬೆಲ್ಜಿಯಂ ಮುಖಾಮುಖಿ

***********

ಪ್ರಧಾನಿ ನರೇಂದ್ರ ಮೋದಿ ಅವರು ಆಸ್ಟ್ರೇಲಿಯಾಕ್ಕೆ ಐತಿಹಾಸಿಕ, ಉನ್ನತ ಮಟ್ಟದ ಭೇಟಿಯನ್ನು ಅಧಿಕೃತವಾಗಿ ಸಂಪನ್ನಗೊಳಿಸಿದ್ದಾರೆ. ಈ ಭೇಟಿಯು ಭಾರತ-ಆಸ್ಟ್ರೇಲಿಯಾ ಎರಡು ಪ್ರಜಾಪ್ರಭುತ್ವ ರಾಷ್ಟ್ರಗಳ ನಡುವಿನ ರಾಜತಾಂತ್ರಿಕ, ಆರ್ಥಿಕ ಮತ್ತು ಭದ್ರತಾ ಸಂಬಂಧಗಳನ್ನು ಮುನ್ನಡೆಸಿದೆ. ಇದಕ್ಕೂ ಮುನ್ನ ಪ್ರವಾಸದ ಅಂತಿಮ ದಿನವಾದ ಇಂದು ಮೆಲ್ಬೋರ್ನ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಆಸ್ಟ್ರೇಲಿಯಾದ ವಿರೋಧ ಪಕ್ಷದ ನಾಯಕ ಆಂಗಸ್ ಟೇಲರ್ ಅವರನ್ನು ಭೇಟಿ ಮಾಡಿದರು. ಈ ವೇಳೆ ರಕ್ಷಣೆ, ವ್ಯಾಪಾರ, ಶಿಕ್ಷಣ, ಇಂಡೋ-ಪೆಸಿಫಿಕ್ ಭದ್ರತೆ, ಹೂಡಿಕೆ ಮತ್ತು ಜನರ ನಡುವಿನ ಬಾಂಧವ್ಯವನ್ನು ಬಲಪಡಿಸಲು ಉಭಯ ನಾಯಕರು ತಮ್ಮ ಬೆಂಬಲವನ್ನು ಪುನರುಚ್ಚರಿಸಿದರು. ಕಾರ್ಯತಂತ್ರದ ಪಾಲುದಾರಿಕೆಯನ್ನು ಬೆಂಬಲಿಸುತ್ತಾ, ಆಂಗಸ್ ಟೇಲರ್ ಅವರು, ಪ್ರಧಾನಿ ನರೇಂದ್ರ ಮೋದಿ ಅವರನ್ನು 'ಆಸ್ಟ್ರೇಲಿಯಾದ ನಿಜವಾದ ಸ್ನೇಹಿತ' ಎಂದು ಕರೆದಿದ್ದಾರೆ. ಅಲ್ಲದೇ ಸಾರ್ವಭೌಮತ್ವವನ್ನು ರಕ್ಷಿಸಲು ಮತ್ತು ಇಂಡೋ-ಪೆಸಿಫಿಕ್‌ನಲ್ಲಿ ಸ್ಥಿರತೆಯನ್ನು

ಬೆಂಬಲಿಸಲು ರಾಷ್ಟ್ರಗಳ ನಡುವಿನ ಸಂಬಂಧಗಳನ್ನು ಬಲಪಡಿಸುವ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

***********

ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಮೂರು ರಾಷ್ಟ್ರಗಳ ಪ್ರವಾಸದ ಮೂರನೇ ಮತ್ತು ಅಂತಿಮ ಚರಣದಲ್ಲಿ ಇಂದು ನ್ಯೂಜಿಲೆಂಡ್‌ಗೆ ಭೇಟಿ ನೀಡಲಿದ್ದಾರೆ. ಎರಡು ದಿನಗಳ ಭೇಟಿಗಾಗಿ ಅವರು ಇಂದು ಆಕ್ಲೆಂಡ್ ತಲುಪಲಿದ್ದಾರೆ. ಭೇಟಿಯ ಸಮಯದಲ್ಲಿ ಅವರು ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಕಳೆದ ಎರಡು ವರ್ಷಗಳಲ್ಲಿ, ವಿಶೇಷವಾಗಿ ವ್ಯಾಪಾರ ಮತ್ತು ವಾಣಿಜ್ಯ ಹಾಗೂ ರಕ್ಷಣಾ ಕ್ಷೇತ್ರಗಳಲ್ಲಿ ಗಮನಾರ್ಹ ಪ್ರಗತಿಯನ್ನು ಕಂಡಿರುವ ದ್ವಿಪಕ್ಷೀಯ ಸಂಬಂಧದ ಸಂಪೂರ್ಣ ವ್ಯಾಪ್ತಿಯನ್ನು ಉಭಯ ನಾಯಕರು ಪರಿಶೀಲಿಸಲಿದ್ದಾರೆ. ಕಳೆದ ೪೦ ವರ್ಷಗಳಲ್ಲಿ ಭಾರತೀಯ ಪ್ರಧಾನಿಯೊಬ್ಬರು ಮೊದಲ ಬಾರಿಗೆ ನ್ಯೂಜಿಲೆಂಡ್‌ಗೆ ಭೇಟಿ ನೀಡುತ್ತಿದ್ದಾರೆ.ಭಾರತ ಮತ್ತು ನ್ಯೂಜಿಲೆಂಡ್ ನಡುವೆ ಇರುವ ಬಲವಾದ ಜನರ ಸಂಬಂಧಗಳ ಪ್ರತಿಬಿಂಬವಾಗಿ, ಪ್ರಧಾನಿ ನರೇಂದ್ರ ಮೋದಿಯವರು ಈ ಭೇಟಿಯ ಸಮಯದಲ್ಲಿ ಭಾರತೀಯ ಸಮುದಾಯ ಉದ್ದೇಶಿಸಿ ಮಾತನಾಡಲಿದ್ದಾರೆ.

***********

ಕೇಂದ್ರ ಸರ್ಕಾರ ಇ-ಲ೫ ಇಂಧನ ಪರಿಚಯಿಸಲು ಯೋಜನೆ ರೂಪಿಸಿದೆ. ಇದು ಇ-೨೦ ಪೆಟ್ರೋಲ್‌ಗಿಂತ ಪ್ರತಿ ಲೀಟರ್‌ಗೆ ಸುಮಾರು ೨೦ ರೂಪಾಯಿ ಕಡಿಮೆ ಬೆಲೆಯಲ್ಲಿರಲಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ತಿಳಿಸಿದ್ದಾರೆ. ಖಾಸಗಿ ಸುದ್ದಿವಾಹಿನಿಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಅವರು, ಇ-ಲ೫ ಇಂಧನವನ್ನು, ಈ ರೀತಿಯ ಇಂಧನ ಬಳಕೆಗೆ ವಿನ್ಯಾಸಗೊಳಿಸಲಾದ ವಾಹನಗಳಿಗೆ ಮಾತ್ರ ಸೀಮಿತಗೊಳಿಸಲಾಗುವುದು ಎಂದು ಸ್ಪಷ್ಟಪಡಿಸಿದರು. ಗ್ರಾಹಕರಿಗೆ ಆರ್ಥಿಕ ಪರಿಹಾರ ಒದಗಿಸುವುದರ ಜೊತೆಗೆ, ಸರ್ಕಾರದ ಎಥೆನಾಲ್ ಮಿಶ್ರಣ ಕಾರ್ಯಕ್ರಮಕ್ಕೆ ಮತ್ತಷ್ಟು ಉತ್ತೇಜನ ನೀಡುವುದು ಈ ಕ್ರಮದ ಉದ್ದೇಶವಾಗಿದೆ ಎಂದು ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ.

***********

ಎರಡನೇ ಬಾರಿಗೆ ದೇಶದ ವಿದ್ಯುತ್ ಬೇಡಿಕೆಯ ಶೇಕಡ ೫೦ಕ್ಕೂ ಹೆಚ್ಚು ಭಾಗವನ್ನು ಶುದ್ಧ ಇಂಧನ ಮೂಲಗಳು ಪೂರೈಸಿವೆ ಎಂದು ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ

ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಈ ತಿಂಗಳ ೬ ರಂದು ನವೀಕರಿಸಬಹುದಾದ ಇಂಧನ ಮೂಲಗಳು ದೇಶದ ಒಟ್ಟು ವಿದ್ಯುತ್ ಪೂರೈಕೆಯಲ್ಲಿ ಶೇಕಡ ೫೦.೨ರಷ್ಟು ಕೊಡುಗೆ ನೀಡಿವೆ. ಇದು ಭಾರತದ ಶುದ್ಧ ಇಂಧನ ಪರಿಸರ ವ್ಯವಸ್ಥೆಯ ಹೆಚ್ಚುತ್ತಿರುವ ಸಾಮರ್ಥ್ಯ ಮತ್ತು ವಿಶ್ವಾಸಾರ್ಹತೆಗೆ ಸಾಕ್ಷಿಯಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತ ವೇಗ ಮತ್ತು ದೃಢ ಸಂಕಲ್ಪದೊಂದಿಗೆ ಸುಸ್ಥಿರ ಅಭಿವೃದ್ಧಿಗೆ ಶಕ್ತಿ ತುಂಬುವ ಕಾರ್ಯವನ್ನು ಮುಂದುವರಿಸುತ್ತಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

***********

ತಮಿಳುನಾಡಿನ ಕೊಯಮತ್ತೂರಿನಲ್ಲಿ ಇಂದು ಮಾನವ-ವನ್ಯಜೀವಿ ಸಂಘರ್ಷ ಕುರಿತ ಉತ್ಕೃಷ್ಟತಾ ಕೇಂದ್ರವನ್ನು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದ್ರ ಯಾದವ್ ಉದ್ಘಾಟಿಸಿದರು. ಬಳಿಕ ನಡೆದ ಮಾನವ-ವನ್ಯಜೀವಿ ಸಂಘರ್ಷ ಕುರಿತ ರಾಷ್ಟ್ರೀಯ ಕಾರ್ಯಾಗಾರದಲ್ಲಿ ದೇಶದ ವಿವಿಧ ಭಾಗಗಳಿಂದ ಆಗಮಿಸಿದ್ದ ಹಿರಿಯ ನೀತಿ ನಿರೂಪಕರು, ಅರಣ್ಯ ಅಧಿಕಾರಿಗಳು, ವಿಜ್ಞಾನಿಗಳು, ಸಂಶೋಧಕರು, ತಂತ್ರಜ್ಞಾನ ತಜ್ಞರು ಹಾಗೂ ಪರಿಣಿತರು ಭಾಗವಹಿಸಿ, ಮಾನವ-ವನ್ಯಜೀವಿ ಸಂಘರ್ಷವನ್ನು ಪರಿಣಾಮಕಾರಿಯಾಗಿ ತಗ್ಗಿಸುವ ಕಾರ್ಯತಂತ್ರಗಳ ಕುರಿತು ಚರ್ಚಿಸಿದರು. ಕಾರ್ಯಾಗಾರದಲ್ಲಿ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಖಾತೆ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಉಪಸ್ಥಿತರಿದ್ದರು.ಕಾರ್ಯಾಗಾರ ಉದ್ದೇಶಿಸಿ ಮಾತನಾಡಿದ ಸಚಿವ ಭೂಪೇಂದ್ರ ಯಾದವ್, ಪರಿಹಾರ ಕೇಂದ್ರಿತ ದೃಷ್ಟಿಕೋನದೊಂದಿಗೆ ಆಧುನಿಕ ತಂತ್ರಜ್ಞಾನದ ಪ್ರಗತಿಯನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಕರೆ ನೀಡಿದರು. ಹೊಸದಾಗಿ ಸ್ಥಾಪಿಸಲಾದ ಈ ಉತ್ಕೃಷ್ಟತಾ ಕೇಂದ್ರವು ಮಾನವ-ವನ್ಯಜೀವಿ ಸಂಘರ್ಷದ ವೈಜ್ಞಾನಿಕ ಮತ್ತು ಸಾಕ್ಷ್ಯಾಧಾರಿತ ನಿರ್ವಹಣೆಯನ್ನು ಬಲಪಡಿಸುವ ಉದ್ದೇಶದಿಂದ ಸಂಶೋಧನೆ, ನಾವೀನ್ಯತೆ, ನೀತಿ ಬೆಂಬಲ, ಸಾಮರ್ಥ್ಯ ವೃದ್ಧಿ ಹಾಗೂ ಉತ್ತಮ ಕಾರ್ಯಪದ್ಧತಿಗಳ ಪ್ರಸಾರದ ರಾಷ್ಟ್ರೀಯ ಕೇಂದ್ರವಾಗಿ ಕಾರ್ಯನಿರ್ವಹಿಸಲಿದೆ ಎಂದು ಅವರು ತಿಳಿಸಿದರು.

***********

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಕುವೈತ್ ಪ್ರವಾಸ ಮುಕ್ತಾಯಗೊಳಿಸಿ ಇಂದು ಒಮಾನ್‌ಗೆ ಆಗಮಿಸಿದ್ದಾರೆ. ಒಮಾನ್ ವಿದೇಶಾಂಗ ಸಚಿವಾಲಯದ ಮಹಾನಿರ್ದೇಶಕ ಶೇಖ್

ಅಹ್ಮದ್ ಅಲ್ ಮಸ್ಕರಿ ಅವರು ಡಾ. ಜೈಶಂಕರ್ ಅವರನ್ನು ಸ್ವಾಗತಿಸಿದರು. ಒಮಾನ್ ಭೇಟಿ ಪೂರ್ಣಗೊಳಿಸಿದ ಬಳಿಕ ಅವರು ನ್ಯೂಯಾರ್ಕ್‌ಗೆ ತೆರಳಿ, ೨೦೨೮-೨೯ರ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಸದಸ್ಯತ್ವಕ್ಕಾಗಿ ಭಾರತದ ಅಧಿಕೃತ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ನಂತರ ಅವರು ಇದೇ ೧೪ ಮತ್ತು ೧೫ರಂದು ಬ್ರಸೆಲ್ಸ್‌ಗೆ ಭೇಟಿ ನೀಡಿ, ಭಾರತ-ಐರೋಪ್ಯ ಒಕ್ಕೂಟದ ಮೂರನೇ ವ್ಯಾಪಾರ ಮತ್ತು ತಂತ್ರಜ್ಞಾನ ಮಂಡಳಿ ಸಭೆಯಲ್ಲಿ ಭಾಗವಹಿಸಲಿದ್ದು, ಐರೋಪ್ಯ ಒಕ್ಕೂಟ ಹಾಗೂ ಬೆಲ್ಜಿಯಂನ ವಿದೇಶಾಂಗ ಸಚಿವರೊಂದಿಗೆ ಮಾತುಕತೆ ನಡೆಸಲಿದ್ದಾರೆ.

***********

ಏಕರೂಪ ನಾಗರಿಕ ಸಂಹಿತೆ ಜಾರಿ ನಿಟ್ಟಿನಲ್ಲಿ ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ರಂಜನಾ ದೇಸಾಯಿ ನೇತೃತ್ವದಲ್ಲಿ ಏಳು ಸದಸ್ಯರ ಸಮಿತಿಯನ್ನು ರಚಿಸುವುದಾಗಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಘೋಷಿಸಿದ್ದಾರೆ. ಸಮಿತಿಯು ಮುಂದಿನ ಆರು ತಿಂಗಳೊಳಗೆ ತನ್ನ ವರದಿಯನ್ನು ಮಹಾರಾಷ್ಟ್ರ ಸರ್ಕಾರಕ್ಕೆ ಸಲ್ಲಿಸಲಿದೆ.

***********

ಮಕ್ಕಳ ಕೇಂದ್ರಿತ ಅಭಿವೃದ್ಧಿ, ಶಾಲಾ ಶಿಕ್ಷಣ ಮತ್ತು ಮಾನವ ಅಭಿವೃದ್ಧಿಯ ಕುರಿತು ಸಹಯೋಗವನ್ನು ಬಲಪಡಿಸಲು ನೀತಿ ಆಯೋಗದ ಸದಸ್ಯೆ ಡಾ. ಜೋರಾಮ್ ಅನಿಯಾ ಅವರು, ನವದೆಹಲಿಯಲ್ಲಿ ಯುನಿಸೆಫ್‌ಗೆ ಭಾರತದ ಪ್ರತಿನಿಧಿ ಸಿಂಥಿಯಾ ಮೆಕ್‌ಕ್ಯಾಫ್ರಿ ನೇತೃತ್ವದ ನಿಯೋಗದೊಂದಿಗೆ ಸಂವಾದ ನಡೆಸಿದರು. ನೀತಿ ಆಯೋಗದ ಪ್ರಕಾರ, ಸಭೆಯಲ್ಲಿ ಸುರಕ್ಷಿತ ಮತ್ತು ಎಲ್ಲರನ್ನು ಒಳಗೊಳ್ಳುವ ಕಲಿಕಾ ವಾತಾವರಣ, ಸಾಕ್ಷರತೆ, ಶಿಕ್ಷಕರ ಜ್ಞಾನ, ವಿದ್ಯಾರ್ಥಿಗಳ ಯೋಗಕ್ಷೇಮ, ಸೈಬರ್ ಸುರಕ್ಷತೆ ಹಾಗೂ ಡಿಜಿಟಲ್ ಭದ್ರತೆ ವಿಷಯಗಳ ಕುರಿತು ಸಮಗ್ರ ಚರ್ಚೆ ನಡೆಸಲಾಯಿತು. ಸಭೆಯಲ್ಲಿ ಸಾಕ್ಷ್ಯಾಧಾರಿತ ನೀತಿ ರೂಪಣೆ, ಸಮುದಾಯದ ಭಾಗವಹಿಸುವಿಕೆ, ವಿಪತ್ತು ನಿರೋಧಕ ಸಾಮರ್ಥ್ಯ ಹಾಗೂ ಮಕ್ಕಳ ಕಲ್ಯಾಣ ಮತ್ತು ಶಿಕ್ಷಣದ ಫಲಿತಾಂಶಗಳನ್ನು ಸುಧಾರಿಸುವಲ್ಲಿ ಮಹಿಳಾ ಸ್ವಸಹಾಯ ಸಂಘಗಳ ಪಾತ್ರದ ಮಹತ್ವವನ್ನು ಡಾ. ಜೋರಾಮ್ ಅನಿಯಾ ಒತ್ತಿ ಹೇಳಿದರು.

***********

ಮಹಿಳಾ ಕ್ರಿಕೆಟ್‌ನಲ್ಲಿ, ಹರ್ಮನ್‌ಪ್ರೀತ್ ಕೌರ್ ನೇತೃತ್ವದ ಭಾರತ ತಂಡ ಇಂದು ಲಂಡನ್‌ನ ಲಾರ್ಡ್ಸ್ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಟೆಸ್ಟ್ ಪಂದ್ಯದಲ್ಲಿ ಆತಿಥೇಯ ಇಂಗ್ಲೆಂಡ್

ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩:೩೦ ಕ್ಕೆ ಪ್ರಾರಂಭವಾಗಲಿದೆ. ಈ ಪಂದ್ಯವು ಲಾರ್ಡ್ಸ್ ಕ್ರಿಕೆಟ್ ಕ್ರೀಡಾಂಗಣಕ್ಕೆ ಒಂದು ಮಹತ್ವದ ಸಂದರ್ಭವಾಗಿದೆ. ಏಕೆಂದರೆ ಇದು ಈ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮೊದಲ ಮಹಿಳಾ ಟೆಸ್ಟ್ ಪಂದ್ಯವಾಗಿದೆ. ಈ ಪಂದ್ಯಕ್ಕಾಗಿ ಈಗಾಗಲೇ ೩೩ ಸಾವಿರಕ್ಕೂ ಹೆಚ್ಚು ಜನರು ತಮ್ಮ ಆಸನಗಳನ್ನು ಕಾಯ್ದಿರಿಸಿದ್ದಾರೆ.

***********

ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ ಎರಡನೇ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಇಂದು ಸ್ಪೇನ್ ತಂಡ, ಬೆಲ್ಜಿಯಂ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯರಾತ್ರಿ ೧೨.೩೦ಕ್ಕೆ ಆರಂಭವಾಗಲಿದೆ. ಇದಕ್ಕೂ ಮುನ್ನ ಅಮೆರಿಕದ ಮೆಸ್ಸಚುಸೆಟ್ಸ್‌ನ ಬೋಸ್ಟನ್ ಕ್ರೀಡಾಂಗಣದಲ್ಲಿ ನಡೆದ ಮೊದಲ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಫ್ರಾನ್ಸ್ ತಂಡ, ಮೊರಾಕೊ ತಂಡವನ್ನು ೨-೦ ಗೋಲುಗಳಿಂದ ಮಣಿಸಿತು. ಈ ಮೂಲಕ ಫ್ರಾನ್ಸ್ ತಂಡ, ಸೆಮಿಫೈನಲ್ಸ್ ಪ್ರವೇಶಿಸಿದೆ. ಫ್ರಾನ್ಸ್ ಪರ ಕಿಲಿಯನ್ ಎಂಬಪ್ಪೆ ಮತ್ತು ಔಸ್ಮಾನ್ ಡೆಂಬೆಲೆ ತಲಾ ಒಂದು ಗೋಲು ಗಳಿಸುವ ಮೂಲಕ ತಂಡದ ಗೆಲುವಿಗೆ ಕಾರಣರಾದರು. ಉಳಿದ ಕ್ವಾರ್ಟರ್ ಫೈನಲ್ ಪಂದ್ಯಗಳಲ್ಲಿ, ನಾರ್ವೆ ತಂಡ, ಇಂಗ್ಲೆಂಡ್ ವಿರುದ್ಧ ಆಡಲಿದ್ದು, ಹಾಲಿ ಚಾಂಪಿಯನ್ ಅರ್ಜೆಂಟೀನಾ, ಭಾನುವಾರ ಬೆಳಗ್ಗೆ ಸ್ವಿಟ್ಜರ್ಲೆಂಡ್ ತಂಡದ ವಿರುದ್ಧ ಸೆಣಸಲಿದೆ.

***********

ಟೆನಿಸ್‌ನಲ್ಲಿ, ಮಾರ್ಸೆಲೊ ಅರೆವಾಲೊ ಮತ್ತು ಯೆಲೆನಾ ಒಸ್ಟಾಪೆಂಕೊ ಜೋಡಿ, ವಿಂಬಲ್ಡನ್ ಮಿಶ್ರ ಡಬಲ್ಸ್ ಪ್ರಶಸ್ತಿ ಗೆದ್ದಿದೆ. ಲಂಡನ್‌ನ ಸೆಂಟರ್ ಕೋರ್ಟ್‌ನಲ್ಲಿ ನಡೆದ ೧ ಗಂಟೆ ೫೬ ನಿಮಿಷಗಳ ರೋಮಾಂಚಕ ಪಂದ್ಯದಲ್ಲಿ ಈ ಜೋಡಿ, ಆಸ್ಟ್ರೇಲಿಯಾದ ಸ್ಟಾರ್ಮ್ ಹಂಟರ್ ಮತ್ತು ಮಾರ್ಕ್ ಪೋಲ್ಮನ್ಸ್ ಜೋಡಿಯನ್ನು ೪-೬, ೭-೫, ೬-೨ ಸೆಟ್‌ಗಳಿಂದ ಸೋಲಿಸಿದರು.

*****END******